**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಡಾ|| ವೈ ನಾರಾಯಣಸ್ವಾಮಿ ರವರ ನಿಯಮ-72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಹೇಳಿಕೆ:**

**ಸೂಚನೆ**

ಬೆಂಗಳೂರಿನಲ್ಲಿ ಹಲವಾರು ಜಂಕ್ಷನ್/ಸರ್ಕಲ್‌ಗಳಲ್ಲಿ ಭಿಕ್ಷುಕರ ಹಾವಳಿ ಹೆಚ್ಚಾಗಿದ್ದು, ಇದರಿಂದ ನಾಗರೀಕರಿಗೆ ತೊಂದರೆ ಆಗುತ್ತಿರುವ ಜೊತೆಗೆ, ನಾಗರೀಕ ಸಮಾಜ ತಲೆ ತಗ್ಗಿಸುವಂತಾಗಿದೆ. ಈ ಭಿಕ್ಷಾಟಣೆ ಹಿಂದೆ ಕೆಲವು ಮಾಫಿಯಾಗಳು ಕೆಲಸ ಮಾಡುತ್ತಿವೆ ಎಂದು ಅನುಮಾನ ಪಡಲಾಗಿದೆ. ಈ ಭಿಕ್ಷಾಟಣೆಯನ್ನು ನೇರವಾಗಿ ನೋಡುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು/ಸಿಬ್ಬಂದಿಗಳು ಯಾವುದೇ ಇಲಾಖೆಯಿಂದ ಕ್ರಮ ಕೈಗೊಳ್ಳದಿರುವ ಗಂಭೀರವಾದ ವಿಷಯದ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:-**

ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಕೇಂದ್ರ ಪರಿಹಾರ ಸಮಿತಿಯು ಶಾಸನಬದ್ಧ ಸ್ವಾಯತ್ತ ಸಂಸ್ಥೆಯಾಗಿದ್ದು, ರಾಜ್ಯಾದ್ಯಂತ ಭಿಕ್ಷಾಟನೆ ನಿರ್ಮೂಲನೆ ಸಂಬಂಧ ಸರ್ಕಾರದಿಂದ ರಚಿತವಾಗಿರುವ ಕರ್ನಾಟಕ ಭಿಕ್ಷಾಟನಾ ನಿಷೇಧ ಕಾಯಿದೆ 1975 ರಡಿ ಕಾರ್ಯನಿರ್ವಹಿಸುತ್ತಿದೆ. ಸದರಿ ಕಾಯಿದೆಯಲ್ಲಿ 18 ವರ್ಷ ಮೇಲ್ಪಟ್ಟ ಮಹಿಳೆ ಮತ್ತು 16 ವರ್ಷ ಮೇಲ್ಪಟ್ಟ ಪುರುಷರು ಭಿಕ್ಷಾಟನೆಯಲ್ಲಿ ತೊಡಗಿದ್ದಲ್ಲಿ ಭಿಕ್ಷಾಟನಾ ಅಪರಾಧಕ್ಕಾಗಿ ಬಂಧಿಸಿ, ತಾಲ್ಲೂಕು ದಂಡಾಧಿಕಾರಿಗಳ ಅನುಮತಿ ಪಡೆದು ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿ ದಾಖಲಿಸಿಕೊಳ್ಳಲಾಗುತ್ತಿದೆ.

ಬೆಂಗಳೂರು ಹಲವಾರು ಜಂಕ್ಷನ್/ಸರ್ಕಲ್‌ಗಳಲ್ಲಿ ಭಿಕ್ಷೆ ಬೇಡುವವರನ್ನು ಕರ್ನಾಟಕ ಭಿಕ್ಷಾಟನಾ ನಿಷೇದ ಅಧಿನಿಯಮ 1975 ರನ್ವಯ ಭಿಕ್ಷಾಟನೆಯಲ್ಲಿ ತೊಡಗಿರುವವರನ್ನು ಬಂಧಿಸಿ ನಿಯಮಾನುಸಾರ ತಾಲ್ಲೂಕು ದಂಡಾಧಿಕಾರಿಗಳ ರವರ ಮುಂದೆ ಹಾಜರುಪಡಿಸಿ, ಬಂಧನದ ಆದೇಶದಂತೆ ಬೆಂಗಳೂರು ನಿರಾಶ್ರಿತರ ಪರಿಹಾರ ಕೇಂದ್ರದ ರಕ್ಷಣೆಯಲ್ಲಿ ಇರಿಸಲಾಗುವುದು. ರಕ್ಷಣೆಯಲ್ಲಿರುವ ನಿರಾಶ್ರಿತರುಗಳಿಗೆ ಉಚಿತ ಉಪಹಾರ-ಊಟ, ವಸತಿ, ಸಮವಸ್ತ್ರ, ಹಾಸಿಗೆ-ಹೊದಿಕೆ, ಔಷದೋಪಚಾರ ನೀಡಲಾಗುವುದು. ದೃಢಕಾಯ ನಿರಾಶ್ರಿತರಿಗೆ ವಿವಿಧ ವೃತ್ತಿಗಳಲ್ಲಿ ತರಬೇತಿ ನೀಡಲಾಗುವುದು. ಕಳೆದ ಮಾರ್ಚ್-2020 ರಿಂದ ಕೋವಿಡ್-19 ಸಾಂಕ್ರಾಮಿಕ ರೋಗವು ಹೆಚ್ಚಾಗಿ ಹರಡುತ್ತಿದ್ದ ಸಂದರ್ಭದಲ್ಲಿ ಭಿಕ್ಷಾಟನಾ ನಿರತ ಭಿಕ್ಷುಕಕರನ್ನು ಬಂಧಿಸಿ, ಕೋವಿಡ್-19 ರ ವೈದ್ಯಕೀಯ ಪರೀಕ್ಷೆ ನಡೆಸಿ, ವರದಿ ಬರುವವರೆಗೂ ಕನಿಷ್ಠ 15 ದಿನಗಳ ಕಾಲಾ ಪ್ರತ್ಯೇಕವಾಗಿರಿಸಿ ನಂತರ ಅವರಿಗೆ ನಿರಾಶ್ರಿತರ ಪರಿಹಾರ ಕೇಂದ್ರದ ರಕ್ಷಣೆಯಲ್ಲಿ ಇರಿಸಲು ಕಾಲಾವಕಾಶ ಬೇಕಾಗಿರುತ್ತದೆ. ಇಲ್ಲವಾದ್ದಲ್ಲಿ, ಬಂಧಿಸಿದ ಭಿಕ್ಷುಕರಿಗೆ ಕೋವಿಡ್-19 ಸಾಂಕ್ರಾಮಿಕ ರೋಗವಿದ್ದಲ್ಲಿ, ಹಾಲಿ ಕೇಂದ್ರದಲ್ಲಿರುವ ನಿರಾಶ್ರಿತರಿಗೆ ಅತಿ ವೇಗವಾಗಿ ರೋಗವು ಹರಡುವ ಸಾಧ್ಯತೆ ಹೆಚ್ಚಾಗಿರುತ್ತದೆ. ಈ ಮಧ್ಯೆ ದೂರುಗಳು ಬಂದಲ್ಲಿ ನಿಯಮಾನುಸಾರ ಬಂಧಿಸಲು ಕ್ರಮವಹಿಸಲಾಗುತ್ತಿದೆ ಹಾಗೂ ಕೋವಿಡ್-19 ಸಾಂಕ್ರಾಮಿಕ ರೋಗವು ಗಣನೀಯವಾಗಿ ಕಡಿಮೆಯಾದಲ್ಲಿ ನಿರಂತರವಾಗಿ ಭಿಕ್ಷುಕರನ್ನು ಬಂಧಿಸಲು ಕ್ರಮವಹಿಸಲಾಗುವುದು.

ಸಕಇ 18 ಎಸ್‌ಬಿಆರ್ 2021

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು